# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 882**

**ಸದಸ್ಯರ ಹೆಸರು : ಶ್ರೀ ಎಂ ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)**

**ಉತ್ತರಿಸಬೇಕಾದ ದಿನಾಂಕ : 16.12.2024**

**ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಡ್ಡಾಯ ಮತ್ತು ಉಚಿತ ಪ್ರಾಥಮಿಕ ಶಿಕ್ಷಣ ಸಾಂವಿಧಾನಿಕ ಬಾಧ್ಯತೆಗಳನ್ನು ಪೂರೈಸಲು ಸರ್ಕಾರವು ಯೋಜಿಸಿರುವ ಯೋಜನೆ ಕುರಿತು ಮಾಹಿತಿ ನೀಡುವುದು; | ಕಡ್ಡಾಯ ಮತ್ತು ಉಚಿತ ಪ್ರಾಥಮಿಕ ಶಿಕ್ಷಣ ಸಂವಿಧಾನಿಕ ಬಾಧ್ಯತೆಗಳನ್ನು ಪೂರೈಸಲು ಸರ್ಕಾರವು ಯೋಜಿಸಿರುವ ಯೋಜನೆ ಕುರಿತು ಮಾಹಿತಿ ಕೆಳಗಿನಂತಿದೆ.<br><br>**ಆರ್.ಟಿ.ಇ:**<br>ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ 2009 ನ್ನು ಕರ್ನಾಟಕ ರಾಜ್ಯದಲ್ಲಿ ಅಧಿಸೂಚನೆ ಸಂಖ್ಯೆ : ಇಡಿ 77 ಯೋಯೋಕ 2010 ದಿನಾಂಕ : 28.04.2012 ರನ್ವಯ ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ನಿಯಮಗಳನ್ನು 2012 ನೇ ಸಾಲಿನಿಂದ ಜಾರಿಗೆ ತರಲಾಗಿದೆ.<br>ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್ 12(1)(ಬಿ) ಮತ್ತು 12(1)ಸಿ ರಂತೆ ಹಾಗೂ ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ನಿಯಮಗಳು 2012 ಹಾಗೂ ಸರ್ಕಾರದ ಆದೇಶ ಸಂಖ್ಯೆ : ಇಡಿ 36 ಪಿಜಿಸಿ 2018 ದಿನಾಂಕ :30.01.2019 ತಿದ್ದುಪಡಿಯಂತೆ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ಶೇಕಡಾ 25 ರಷ್ಟು ಸೀಟುಗಳನ್ನು ಅನಾನುಕೂಲ ಪರಿಸ್ಥಿತಿಯಲ್ಲಿರುವ ಹಾಗೂ ದುರ್ಬಲ ವರ್ಗದ ನೆರೆಹೊರೆಯಲ್ಲಿನ ಮಕ್ಕಳಿಗೆ ಸೀಟುಗಳನ್ನು ಕಾಯ್ದಿರಿಸಿ ಪ್ರವೇಶಾತಿ ನೀಡಲಾಗುತ್ತಿದೆ.<br><br>**ಉಚಿತ ಪಠ್ಯ ಪುಸ್ತಕ ಸರಬರಾಜು:**<br>ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ಕರ್ನಾಟಕ ಪಠ್ಯ ಪುಸ್ತಕ ಸಂಘದ ಕಛೇರಿ ವತಿಯಿಂದ 1 ರಿಂದ 10ನೇ ತರಗತಿಯ ಸರ್ಕಾರಿ, ಸರ್ಕಾರಿ ಅನುದಾನಿತ ಶಾಲಾ ಮಕ್ಕಳಿಗೆ ಪಠ್ಯಪುಸ್ತಕಗಳು, 4 ರಿಂದ 9ನೇ ತರಗತಿಯ ಸರ್ಕಾರಿ ಶಾಲಾ ಮಕ್ಕಳಿಗೆ ಅಭ್ಯಾಸ ಪುಸ್ತಕಗಳು, 1 ರಿಂದ 12ನೇ ತರಗತಿಯ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ದಿನಚರಿ ಹಾಗೂ 1 ರಿಂದ 10ನೇ ತರಗತಿಯ ಸರ್ಕಾರಿ ಮದರಸಾ ಶಾಲೆಗಳಿಗೆ ವಿದ್ಯಾರ್ಥಿಗಳಿಗೆ ಅರೇಬಿಕ್ ಪುಸ್ತಕಗಳನ್ನು ಉಚಿತ ಪಠ್ಯಪುಸ್ತಕಗಳನ್ನು ಮುದ್ರಣ ಹಾಗೂ ಸರಬರಾಜು ಮಾಡಲಾಗುತ್ತಿದೆ.<br><br>**ಉಚಿತ ಸಮವಸ್ತ್ರ ಸರಬರಾಜು:**<br>ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ರಾಜ್ಯದಲ್ಲಿನ 1 ರಿಂದ 10ನೇ ತರಗತಿಯ ಎಲ್ಲಾ ಸರ್ಕಾರಿ ಶಾಲಾ ಮಕ್ಕಳಿಗೆ ಒಂದು ಜೊತೆ ಹಾಗೂ ಸಮಗ್ರ ಶಿಕ್ಷಣ ಕರ್ನಾಟಕದಡಿ ಒಂದು ಜೊತೆ ಒಟ್ಟು ಎರಡು ಜೊತೆ ಸಮವಸ್ತ್ರ ಸರಬರಾಜು ಮಾಡಲಾಗುತ್ತಿದೆ. |

**ಶೂ ಮತ್ತು ಸಾಕ್ಸ್:**

ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ರಾಜ್ಯದಲ್ಲಿನ 1 ರಿಂದ 10ನೇ ತರಗತಿಯ ಎಲ್ಲಾ ಸರ್ಕಾರಿ ಶಾಲಾ ಮಕ್ಕಳಿಗೆ 1 ಜೊತೆ ಶೂ ಮತ್ತು 2 ಜೊತೆ ಸಾಕ್ಸ್‌ಗಳನ್ನು ವಿತರಣೆ ಮಾಡಲಾಗುತ್ತಿದೆ.

**ಮೂಲಭೂತ ಸೌಲಭ್ಯ ಕಲ್ಪಿಸುವ ಯೋಜನೆಗಳು:**

ಕಡ್ಡಾಯ ಮತ್ತು ಉಚಿತ ಪ್ರಾಥಮಿಕ ಶಿಕ್ಷಣ ಸಾಂವಿಧಾನಿಕ ಬಾಧ್ಯತೆಗಳನ್ನು ಪೂರೈಸಲು ರಾಜ್ಯ ಸರ್ಕಾರವು ಸರ್ಕಾರಿ ಶಾಲೆಗಳಿಗೆ ರಾಜ್ಯ ವಲಯದಡಿ ವಿವೇಕ ಯೋಜನೆ, ವಿಶೇಷ ಅಭಿವೃದ್ಧಿ ಯೋಜನೆ, ಮುಖ್ಯ ಮಂತ್ರಿಗಳ ವಿಶೇಷ ಅನುದಾನ ಯೋಜನೆಗಳಡಿ ಹಾಗೂ ಆರ್.ಐ.ಡಿ.ಎಫ್-25ಯಡಿ ಕೊಠಡಿಗಳ ನಿರ್ಮಾಣ, ದುರಸ್ತಿ, ನರೇಗಾ ಸಹಯೋಗದೊಂದಿಗೆ ಶೌಚಾಲಯ ನಿರ್ಮಾಣ/ದುರಸ್ತಿ, ಪೀಠೋಪಕರಣ ಮತ್ತು ಶಾಲೆಗಳ ದೈನಂದಿನ ನಿರ್ವಹಣೆಗೆ ಅನುದಾನ ಒದಗಿಸಲಾಗುತ್ತಿದೆ.

**ರಾಜ್ಯ ಶಿಕ್ಷಣ ತರಬೇತಿ ಮತ್ತು ಸಂಶೋಧನಾ ಕೇಂದ್ರ**

1. ಕಡ್ಡಾಯ ಮತ್ತು ಉಚಿತ ಪ್ರಾಥಮಿಕ ಶಿಕ್ಷಣ ಸಾಂವಿಧಾನಿಕ ಬಾಧ್ಯತೆಗಳನ್ನು ಪೂರೈಸಲು ಸರ್ಕಾರವು ಯೋಜಿಸಿರುವ ಯೋಜನೆಗಳಲ್ಲಿ ಆಂಗ್ಲ ಮಾಧ್ಯಮ ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸುವುದು ಸಹ ಒಂದಾಗಿದೆ 2019-20ನೇ ಸಾಲಿನಿಂದ ರಾಜ್ಯ ಸರ್ಕಾರವು ಉತ್ತಮ ಗುಣಮಟ್ಟದ ಶಿಕ್ಷಣವನ್ನು ಹೆಚ್ಚಿಸಲು ಹಾಗೂ ದಾಖಲಾತಿ ಪ್ರಮಾಣವನ್ನು ಹೆಚ್ಚಿಸುವ ಸದುದ್ದೇಶದಿಂದ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ನಡೆಯುತ್ತಿರುವ ಕನ್ನಡ/ಇತರೆ ಮಾಧ್ಯಮದ ಜೊತೆಗೆ ಹೊಸದಾಗಿ ಆಂಗ್ಲ ದ್ವಿಭಾಷಾ ಮಾಧ್ಯಮ (Bilingual) ತರಗತಿಗಳನ್ನು ಪ್ರಾರಂಭಿಸಿದೆ. ಒಟ್ಟು ರಾಜ್ಯದಲ್ಲಿ 4129 ಆಂಗ್ಲ ಮಾಧ್ಯಮ ದ್ವಿಭಾಷಾ ಶಾಲೆಗಳನ್ನು ಆರಂಭಿಸಲಾಗಿದೆ. ಪ್ರತಿ ವರ್ಷ ಸದರಿ ಶಾಲೆಗಳಲ್ಲಿ ಬೋಧಿಸುತ್ತಿರುವ ಶಿಕ್ಷಕರುಗಳಿಗೆ EMTIP (English Medium Teachers Induction Programme) 8 ದಿನಗಳ ತರಬೇತಿಯನ್ನು ನೀಡಲಾಗುತ್ತಿದೆ. (Learning outcome based).ಸದರಿ ಸಾಲಿನಲ್ಲಿ 1 ರಿಂದ 5 ನೇ ತರಗತಿಯನ್ನು ಬೋಧಿಸುವ 11234 ಶಿಕ್ಷಕರಿಗೆ ತರಬೇತಿಯನ್ನು ಆಯೋಜಿಸಲು ಯೋಜಿಸಲಾಗಿದೆ.

2. 2024-25ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 6ನೇ ತರಗತಿಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ. 6ನೇ ತರಗತಿ ಬೋಧಿಸುವ ಶಿಕ್ಷಕರಿಗೆ ಪ್ರತಿ ಶಾಲೆಗೆ ಇಬ್ಬರು ಶಿಕ್ಷಕರಂತೆ ಒಟ್ಟು 2002 ಶಿಕ್ಷಕರಿಗೆ ವಿಷಯವಾರು ಇಂಗ್ಲಿಷ್, ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನ ವಿಷಯಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ. ಈ ತರಬೇತಿಗಳು ಸರ್ಕಾರಿ ಶಾಲಾ ದಾಖಲಾತಿ ಪ್ರಮಾಣವನ್ನು ಹೆಚ್ಚಿಸಲು ಮತ್ತು ಉತ್ತಮ ಗುಣಮಟ್ಟದ ಶಿಕ್ಷಣವನ್ನು ಹಾಗೂ ಕಡ್ಡಾಯ ಮತ್ತು ಉಚಿತ ಪ್ರಾಥಮಿಕ ಶಿಕ್ಷಣ ಸಾಂವಿಧಾನಿಕ ಬಾಧ್ಯತೆಗಳನ್ನು ಪೂರೈಸಲು ಸಹಕಾರಿಯಾಗುತ್ತವೆ.

| | | |
|---|---|---|
| ಆ) | ಮಧ್ಯಾಹ್ನದ ಊಟ, ಆಪರೇಷನ್ ಬ್ಲಾಕ್‌ಬೋರ್ಡ್ ಮತ್ತು ಇತರೆ ಶೈಕ್ಷಣಿಕ ಯೋಜನೆಗಳಿಗೆ ಒದಗಿಸಲಾದ ಅನುದಾನಗಳಾವುವು; (ಜಿಲ್ಲಾವಾರು ಮತ್ತು ಯೋಜನೆವಾರು ವಿವರ ನೀಡುವುದು) | **ಮಧ್ಯಾಹ್ನ ಉಪಹಾರ ಯೋಜನೆ:-**<br>ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನ ಬಿಸಿಯೂಟವನ್ನು ನೀಡಲು 2024-25ನೇ ಸಾಲಿನಲ್ಲಿ ರೂ 127.03 ಕೋಟಿಗಳ ಕೇಂದ್ರದ ಪಾಲಿನ ಅನುದಾನ ಮತ್ತು ರೂ 75.01 ಕೋಟಿಗಳ ರಾಜ್ಯದ ಪಾಲಿನ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ಮಧ್ಯಾಹ್ನ ಉಪಹಾರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗಳಿಗೆ ಆಗಸ್ಟ್-2024 ರಿಂದ ಅಕ್ಟೋಬರ್ 2024ರ ವರೆಗೆ 03 ತಿಂಗಳ ಗೌರವ ಸಂಭಾವನೆಯನ್ನು ಪಾವತಿಸಲು ರೂ 123.73 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ರಾಜ್ಯ ಯೋಜನೆ ಕ್ಷೀರಭಾಗ್ಯ ಕಾರ್ಯಕ್ರಮದಡಿ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳು ಬಿಸಿಯೂಟದ ವೆಚ್ಚ ಭರಿಸಲು , 1 ರಿಂದ 10ನೇ ತರಗತಿ ವಿದ್ಯಾರ್ಥಿಗಳ ಕ್ಷೀರಭಾಗ್ಯ ಯೋಜನೆಯ ವೆಚ್ಚ ಹಾಗೂ ರಾಜ್ಯ ಸರ್ಕಾರದಿಂದ ಅನುಷ್ಠಾನ ಮಾಡಲಾಗುತ್ತಿರುವ ಇತರೆ ಕಾರ್ಯಕ್ರಮಗಳ ವೆಚ್ಚ ಭರಿಸಲು ಮೂರನೇ ತ್ರೈಮಾಸಿಕ ಅವಧಿಯವರೆಗೆ ರೂ 641.17 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ. (ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಅವಧಿಗೆಯವರೆಗೆ ಒಟ್ಟಾರೆಯಾಗಿ ರೂ 440.40 ಕೋಟಿಗಳು ಅನುದಾನವನ್ನು ಮತ್ತು ಮೂರನೇ ತ್ರೈಮಾಸಿಕ ಅವಧಿಗೆ ರೂ 200.77 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.)<br><br>ಮಧ್ಯಾಹ್ನ ಉಪಹಾರ ಯೋಜನೆ ಮತ್ತು ಕ್ಷೀರಭಾಗ್ಯ ಯೋಜನೆಯಡಿ ಬಿಡುಗಡೆ ಮಾಡಲಾಗಿರುವ ಅನುದಾನದ ವಿವರಗಳನ್ನು **ಅನುಬಂಧ-1,2,3,4 ಮತ್ತು 5 ರಂತೆ** ಲಗತ್ತಿಸಿದೆ.<br><br>ಪ್ರಸ್ತುತ **ಆಪರೇಷನ್ ಬ್ಲಾಕ್ ಬೋರ್ಡ್** ಯೋಜನೆ ಸ್ಥಗಿತವಾಗಿದೆ.<br><br>**ಉಚಿತ ಪಠ್ಯ ಪುಸ್ತಕ ಸರಬರಾಜು:**<br>ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ಕರ್ನಾಟಕ ಪಠ್ಯ ಪುಸ್ತಕ ಸಂಘದ ಕಛೇರಿ ವತಿಯಿಂದ 1 ರಿಂದ 10ನೇ ತರಗತಿಯ ಸರ್ಕಾರಿ, ಸರ್ಕಾರಿ ಅನುದಾನಿತ ಶಾಲಾ ಮಕ್ಕಳಿಗೆ ಪಠ್ಯಪುಸ್ತಕಗಳು, 4 ರಿಂದ 9ನೇ ತರಗತಿಯ ಸರ್ಕಾರಿ ಶಾಲಾ ಮಕ್ಕಳಿಗೆ ಅಭ್ಯಾಸ ಪುಸ್ತಕಗಳು, 1 ರಿಂದ 12ನೇ ತರಗತಿಯ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ದಿನಚರಿ ಹಾಗೂ 1 ರಿಂದ 10ನೇ ತರಗತಿಯ ಸರ್ಕಾರಿ ಮದರಸಾ ಶಾಲೆಗಳಿಗೆ ವಿದ್ಯಾರ್ಥಿಗಳಿಗೆ ಅರೇಬಿಕ್ ಪುಸ್ತಕಗಳನ್ನು ಉಚಿತ ಪಠ್ಯಪುಸ್ತಕಗಳನ್ನು ಮುದ್ರಣ ಹಾಗೂ ಸರಬರಾಜು ಮಾಡಲಾಗಿರುತ್ತದೆ.<br><br>2024-25ನೇ ಸಾಲಿನ ರಾಜ್ಯ ವಲಯದ ಮುಂದುವರೆದ ಕಾರ್ಯಕ್ರಮ ವಿದ್ಯಾ ವಿಕಾಸ ಯೋಜನೆಯಡಿ ಉಚಿತ ವಿಭಾಗದ ಪಠ್ಯಪುಸ್ತಕ ಮುದ್ರಣ ಮತ್ತು ಸರಬರಾಜು ಸಂಬಂಧ ರೂ.287.69 **ಕೋಟಿ ಆಡಳಿತಾತ್ಮಕ** ಅನುಮೋದನೆ ನೀಡಲಾಗಿರುತ್ತದೆ. ಸದರಿ ಯೋಜನೆಯ ವೆಚ್ಚವನ್ನು ರಾಜ್ಯ ಕಛೇರಿ ಹಂತದಲ್ಲಿಯೇ ಭರಿಸಲಾಗುತ್ತದೆ. |

| | | |
|---|---|---|
| | | **ಉಚಿತ ಸಮವಸ್ತ್ರ ಸರಬರಾಜು:**<br>ರಾಜ್ಯದಲ್ಲಿನ 1 ರಿಂದ 10ನೇ ತರಗತಿಯ ಎಲ್ಲಾ ಸರ್ಕಾರಿ ಶಾಲಾ ಮಕ್ಕಳಿಗೆ ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ಒಂದು ಜೊತೆ ಹಾಗೂ ಸಮಗ್ರ ಶಿಕ್ಷಣ ಕರ್ನಾಟಕದಡಿ ಒಂದು ಜೊತೆ ಒಟ್ಟು ಎರಡು ಜೊತೆ ಸಮವಸ್ತ್ರ ಸರಬರಾಜು ಮಾಡಲಾಗುತ್ತಿದೆ. ಸಮವಸ್ತ್ರಗಳನ್ನು ರಾಜ್ಯಮಟ್ಟದಲ್ಲಿ ಕೇಂದ್ರೀಕೃತವಾಗಿ ಖರೀದಿಸಿ ಸರಬರಾಜು ಮಾಡಲಾಗುತ್ತಿದ್ದು, 2024-25ನೇ ಸಾಲಿನಲ್ಲಿ ಒಟ್ಟು ರೂ.166.6/-ಕೋಟಿ ಅನುದಾನದಡಿ ಎರಡು ಜೊತೆ ಸಮವಸ್ತ್ರಗಳನ್ನು ಸರಬರಾಜು ಮಾಡಲಾಗಿದೆ.<br><br>**ಶೂ ಮತ್ತು ಸಾಕ್ಸ್:**<br>2024-25ನೇ ಸಾಲಿಗೆ ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ರಾಜ್ಯದಲ್ಲಿನ 1 ರಿಂದ 10ನೇ ತರಗತಿಯ ಎಲ್ಲಾ ಸರ್ಕಾರಿ ಶಾಲಾ ಮಕ್ಕಳಿಗೆ 1 ಜೊತೆ ಶೂ ಮತ್ತು 2 ಜೊತೆ ಸಾಕ್ಸ್‌ಗಳನ್ನು ವಿತರಣೆ ಮಾಡಲು ಒಟ್ಟು ರೂ.121.00 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಜಿಲ್ಲಾವಾರು ಬಿಡುಗಡೆ ಮಾಡಲಾಗಿರುವ ಅನುದಾನ ವಿವರಗಳನ್ನು ಅನುಬಂಧಿಸಿದೆ. **(ಅನುಬಂಧ-6)**<br><br>**ರಾಜ್ಯ ಶಿಕ್ಷಣ ತರಬೇತಿ ಮತ್ತು ಸಂಶೋಧನಾ ಕೇಂದ್ರ**<br>ಇತರೆ ಶೈಕ್ಷಣಿಕ ಯೋಜನೆಗಳಡಿಯಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರಿಗೆ ವಿವಿಧ ತರಬೇತಿಗಳನ್ನು ನೀಡಲಾಗುತ್ತಿದೆ.<br>2024-25 ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪ್ರಾರಂಭಿಸಲಾಗಿರುವ ಪೂರ್ವ ಪ್ರಾಥಮಿಕ ತರಗತಿಗಳನ್ನು ಬೋಧಿಸುತ್ತಿರುವ ಶಿಕ್ಷಕರುಗಳಿಗೆ PAB ಅನುಮೋದಿತ ಶಾಲೆಗಳು + KPS ಶಾಲೆಗಳು 1052 + 661 ಶಿಕ್ಷಕರಿಗೆ 03 ದಿನಗಳ ತರಬೇತಿಯನ್ನು ಡಯಟ್‌ಗಳ ಮೂಲಕ ಆಯೋಜಿಸಲಾಗಿದೆ ಒಟ್ಟು ಅನುದಾನ ರೂ. 946800+ 594900 =ರೂ.15,41,700/- ಗಳಾಗಿರುತ್ತದೆ. ಜಿಲ್ಲಾವಾರು ಬಿಡುಗಡೆ ಮಾಡಲಾಗಿರುವ ಅನುದಾನ ವಿವರಗಳನ್ನು ಅನುಬಂಧಿಸಿದೆ. **(ಅನುಬಂಧ-7)** |
| ಇ) | ಪ್ರಾಥಮಿಕ ಶಿಕ್ಷಣವನ್ನು ಒದಗಿಸುವಲ್ಲಿ ಇದುವರೆಗೆ ಸಾಧಿಸಿದ ಯಶಸ್ಸು, ವಿಶೇಷವಾಗಿ ಬಡತನ ರೇಖೆಗಿಂತ ಕೆಳಗಿರುವ ನಾಗರೀಕರಿಗೆ ಮತ್ತು ಈ ಉದ್ದೇಶಕ್ಕಾಗಿ ಕೇಂದ್ರ ಸರ್ಕಾರದಿಂದ ಪಡೆದ ಅನುದಾನ ಎಷ್ಟು? (ಮಾಹಿತಿ ನೀಡುವುದು) | ಪ್ರಾಥಮಿಕ ಹಂತದ ಶಿಕ್ಷಣವನ್ನು ಗುಣಾತ್ಮಕವಾಗಿ ಒದಗಿಸುವ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಎಲ್ಲಾ ಮಕ್ಕಳಿಗೆ ಅನುಕೂಲವಾಗುವಂತೆ ಹಾಗೂ ಅವರು ತರಗತಿಗನುಗುಣವಾದ ಕಲಿಕಾ ಫಲಗಳನ್ನು ಸಾಧಿಸುವಂತೆ ಖಚಿತಪಡಿಸಿಕೊಳ್ಳಲು ಈ ಕೆಳಕಂಡಂತೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.<br>1. ಒಂದನೇ ತರಗತಿಯಲ್ಲಿ ವಿದ್ಯಾರ್ಥಿಗಳನ್ನು ಶಾಲೆಯ ವಾತಾವರಣ ಹಾಗೂ ಕಲಿಯಲು ಸಜ್ಜುಗೊಳಿಸಲು ವಿದ್ಯಾಪ್ರವೇಶ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.<br>2. ಒಂದರಿಂದ ಮೂರನೇ ತರಗತಿ ವಿದ್ಯಾರ್ಥಿಗಳನ್ನು ಸಂತಸದಾಯಕ ಕಲಿಕೆಯಲ್ಲಿ ತೊಡಗಿಸಿಕೊಂಡು ಚಟುವಟಿಕೆ, ಆಟ, ಆಟಿಕೆ, ಕಲೆ ಇತ್ಯಾದಿ ಕಲಿಕಾ ಶಾಸ್ತ್ರಗಳನ್ನು ಒಳಗೊಂಡಂತೆ ತರಗತಿಗಳನ್ನು ನಿರ್ವಹಿಸಲು ಶಿಕ್ಷಕರಿಗೆ ತರಬೇತಿ ನೀಡಲಾಗುತ್ತಿದೆ. ಎಲ್ಲಾ ವಿದ್ಯಾರ್ಥಿಗಳು ತರಗತಿಗನುಗುಣವಾದ ಕಲಿಕಾ ಫಲಗಳನ್ನು |

ಸಾಧಿಸುವಂತೆ ಕ್ರಮವಹಿಸಲಾಗುತ್ತಿದೆ.

3. ನಾಲ್ಕು ಮತ್ತು ಐದನೇ ತರಗತಿಗಳಲ್ಲಿ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಓದು ಕರ್ನಾಟಕ ಹಾಗೂ ಗಣಿತ ಕಲಿಕಾ ಆಂದೋಲನದಂತಹ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ.
4. 93 ಮಹತ್ವಾಕಾಂಕ್ಷಿ ತಾಲ್ಲೂಕುಗಳ 3 ರಿಂದ 5 ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ 6,99,705 ವಿದ್ಯಾರ್ಥಿಗಳಿಗೆ ಗಣಿತ ವಿಷಯದಲ್ಲಿ ಆಸಕ್ತಿ ಮೂಡಿಸಿ ಗಣಿತದ ಪರಿಕಲ್ಪನೆಗಳನ್ನು ಸುಲಭವಾಗಿ ಕಲಿಯುವಂತೆ ಗಣಿತ ಗಣಕ ಕಾರ್ಯಕ್ರಮದ ಮೂಲಕ ಖಚಿತಪಡಿಸಿಕೊಳ್ಳಲಾಗುತ್ತಿದೆ.
5. ಗುಣಮಟ್ಟದ ಮಧ್ಯವರ್ತನೆ (Intervention) ಅಡಿಯಲ್ಲಿ ಪ್ರಾಥಮಿಕ ಹಂತಕ್ಕೆ ಸಂಬಂಧಿಸಿದಂತೆ ಸದರಿ ಕಾರ್ಯಕ್ರಮಗಳನ್ನು ನಿಪುಣ್ ಭಾರತ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು 2024 25ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ರೂ.139511.12 ಲಕ್ಷಗಳ ಮೊತ್ತದ ಅನುಮೋದನೆಯಾಗಿದ್ದು, ರಾಜ್ಯಕ್ಕೆ ರೂ.72070.76 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಒಪ್ಪಿಗೆಯಾಗಿರುತ್ತದೆ.

ಆರ್.ಟಿ.ಇ ಕಾಯಿದೆಯಂತೆ ಉಚಿತ ಶಿಕ್ಷಣ ಪಡೆಯಲು ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಮಕ್ಕಳು ದಾಖಲಾಗಲು ಅವಕಾಶವಿರುತ್ತದೆ. ಆರ್.ಟಿ.ಇ ಶುಲ್ಕ ಮರುಪಾವತಿಗಾಗಿ, ಕೇಂದ್ರ ಸರ್ಕಾರದಿಂದ ಪಡೆದ ಅನುದಾನ ವಿವರ.

| ವರ್ಷ | ಕೇಂದ್ರ ಸರ್ಕಾರದ ಅನುದಾನ (ರೂ.ಲಕ್ಷಗಳಲ್ಲಿ) |
|---|---|
| 2012-13 | 8775.00 |
| 2013-14 | 9880.00 |
| 2014-15 | 10205.00 |
| 2015-16 | 0.00 |
| 2016 17 | 10757.34 |
| 2017-18 | 11860.39 |
| 2018-19 | 17591.17 |
| 2019-20 | 8915.40 |
| 2020-21 | 11999.72 |
| 2021-22 | 11999.33 |
| 2022-23 | 11508.36 |
| 2023-24 | 12000.00 |
| 2024-25 | 12000.00 |

ಇಪಿ 112 ಎಂಎಂಎಸ್ 2024

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.